3 ಪ್ರಸ್ತುತ ಸಾಲಿನಲ್ಲಿ ಲಕ್ಕುಂಡಿಯಲ್ಲಿ ರೂ 12 13 ಲಕ್ಷಗಳ ಅಂದಾಜು ವೆಚ್ಚದಲ್ಲಿ ದೇವಾಲಯದ ಬಳಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ನಿರ್ಮಿಸಲಾಗುತ್ತಿದ್ದು ಕಾಮಗಾರಿ ಪ್ರಗತಿಯಲ್ಲಿದೆ

ಆ) ಹೌದು ವೆಚ್ಚಗಳ ವಿವರ ಕೆಳಕಂಡಂತಿದೆ – ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯ (ಬಸ್ ಸ್ಟಾಂಡ್ ಬಳಿ) – ರೂ 8 86 ಲಕ್ಷ

ಹೆದ್ದಾರಿ ಸೌಲಭ್ಯ	– ರೂ 40 00 ಲಕ್ಷ
ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯ (ದೇವಸ್ಥಾನದ ಬಳಿ)	– ರೂ 12 13 ಲಕ್ಷ
ಒಟ್ಟು	**– ರೂ 60 99 ಲಕ್ಷ**

1493 (2071) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಗ್ರಾಮಾಂತರ ಪ್ರದೇಶಗಳಿಗೆ ಹಾಗೂ ನಗರ ಪ್ರದೇಶಗಳಿಗೆ ಪ್ರಸ್ತುತ ನೀಡುತ್ತಿರುವ ವಿದ್ಯುತ್ ಸೌಲಭ್ಯದ ಅವಧಿಯ ವಿವರಗಳೇನು,

ಆ) ಜಾರಿಯಲ್ಲಿರುವ ಲೋಡ್ ಶೆಡ್ಡಿಂಗ್‌ನಿಂದಾಗಿ ಕುಡಿಯುವ ನೀರಿನ ಪೂರೈಕೆಗೆ ತೊಂದರೆಯಾಗುತ್ತಿರುವುದನ್ನು ತಪ್ಪಿಸಲು ಸರ್ಕಾರದ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) .

ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಪ್ರತಿದಿನ ಸಾಮಾನ್ಯವಾಗಿ 9 ಗಂಟೆಗಳ ಅವಧಿಗೆ ಮೂರು ಫೇಸ್‌ನಲ್ಲಿ 9 ಗಂಟೆಗಳ ಅವಧಿಗೆ ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ 6 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಇರುವುದಿಲ್ಲ ನಗರ/ಪಟ್ಟಣ ಪ್ರದೇಶಗಳಲ್ಲಿ 30 ನಿಮಿಷಗಳ ಕಾಲ ನಿಯಮಿತ

ಲೋಡ್ ಶೆಡ್ಡಿಂಗ್‌ನ್ನು ಕ್ರಮಬದ್ಧವಾಗಿ ನಿರ್ವಹಿಸಲಾಗುತ್ತಿದೆ ಕೆಲವೊಮ್ಮೆ ಅನಿವಾರ್ಯ ಸಂದರ್ಭಗಳಲ್ಲಿ ಅಗತ್ಯವಿರುವ ಅವಧಿಗೆ ಮಾತ್ರ ಅನಿಯಮಿತ ಲೋಡ್ ಶೆಡ್ಡಿಂಗ್‌ನ್ನು ನಿರ್ವಹಿಸುವುದು ಸದ್ಯದ ಪರಿಸ್ಥಿತಿಯಲ್ಲಿ ಅನಿವಾರ್ಯವಾಗಿರುತ್ತದೆ ಇದನ್ನು ಹೊರತುಪಡಿಸಿ, ಉಳಿದ ವೇಳೆಗಳಲ್ಲಿ ನಿರಂತರ ವಿದ್ಯುತ್‌ನ್ನು ಸರಬರಾಜು ಮಾಡಲಾಗುತ್ತಿದೆ

ಆ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಪ್ರತಿ ದಿನ 9 ಗಂಟೆಗಳ ಅವಧಿಗೆ ಮೂರು ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಮಾಡುತ್ತಿರುವುದರಿಂದ, ಈ ಸಮಯದಲ್ಲಿ ವಿದ್ಯುತ್ ಬಳಸಿ ನೀರು ಸರಬರಾಜು ಸ್ಥಾವರಗಳು ನೀರು ಸರಬರಾಜು ಮಾಡಬಹುದಾಗಿರುತ್ತದೆ ಅಲ್ಲದೇ, ನಗರ/ಪಟ್ಟಣ ಪ್ರದೇಶಗಳಲ್ಲಿ ಮುಖ್ಯ ನೀರು ಸರಬರಾಜು ಸ್ಥಾವರಗಳಿಗೆ ಸಾಮಾನ್ಯವಾಗಿ ಪ್ರತ್ಯೇಕ ಫೀಡರ್‌ಗಳ ಮೂಲಕ ವಿದ್ಯುತ್ ಸರಬರಾಜು ಮಾಡುತ್ತಿರುವುದರಿಂದ, ವಿದ್ಯುತ್ ಸರಬರಾಜಿನಲ್ಲಿ ಉಂಟಾಗಬಹುದಾದ ಅಡಚಣೆಗಳನ್ನು ಕನಿಷ್ಠಗೊಳಿಸಲಾಗುತ್ತಿದೆ

1494 (2072) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) – ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಸರ್ಕಾರವು ಪ್ರವಾಸಿ ಕೇಂದ್ರಗಳೆಂದು ಘೋಷಿಸಿರುವ ಸ್ಥಳಗಳು ಯಾವುವು,

ಆ) ಈ ಪ್ರಸಿದ್ಧ ಸ್ಥಳಗಳನ್ನು ಪ್ರವಾಸಿಗರ ಆಕರ್ಷಣೆಗೆ ಒಳಪಡಿಸಲು ಹಾಗೂ ದೇಶ ವಿದೇಶಗಳಿಗೆ ಪರಿಚಯಿಸಲು ಹಾಗೂ ಸೂಕ್ತ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು,

ಇ) ಬೆಳ್ತಂಗಡಿ ತಾಲ್ಲೂಕಿನ ಗುರುವಾಯ ಕೆರೆ ಎಂಬ ಪ್ರದೇಶದಲ್ಲಿ ಒಂದು ಐತಿಹಾಸಿಕ ಹಾಗೂ ಪ್ರಾಚೀನ ಪರಂಪರೆಯ ದೊಡ್ಡ ಕೆರೆಯೊಂದಿದ್ದು ಇದನ್ನು ಇಲಾಖೆಯು ಸ್ವಾಧೀನಗೊಳಿಸಿಕೊಂಡು ಪ್ರಕೃತಿ ವೀಕ್ಷಣಾ ಕೆರೆಯನ್ನಾಗಿ ಅಭಿವೃದ್ಧಿಪಡಿಸಿ ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಸರ್ಕಾರವು ಸಕಾಲಿಕ ಕ್ರಮಗಳನ್ನು ಕೈಗೊಳ್ಳುವರೆ?